**Bangalore**
**Regional News**
**22.08.2026 / 6.40 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಸರ್ಕಾರಿ ಶಾಲಾ-ಕಾಲೇಜುಗಳ ಹೆಣ್ಣು ಮಕ್ಕಳಿಗೆ 'ದೀಪಿಕಾ ಉನ್ನತ ಶಿಕ್ಷಣ ವಿದ್ಯಾರ್ಥಿ ವೇತನ' – ಸಚಿವ ಬಸವರಾಜ ರಾಯರೆಡ್ಡಿ
2. ರಾಜ್ಯದ ೧೦೯ ಬರಪೀಡಿತ ತಾಲೂಕುಗಳಲ್ಲಿ ಅವಲೋಕನ ನಡೆಸುವಂತೆ ಅಧಿಕಾರಿಗಳಿಗೆ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸೂಚನೆ
3. ನೈಸ್ ಯೋಜನೆಗಾಗಿ ಭೂಮಿ ಕಳೆದುಕೊಂಡ ರೈತರಿಗೆ ಇನ್ನೂ ಪರಿಹಾರ ದೊರೆತಿಲ್ಲ - ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ
4. ಧಾರವಾಡದಲ್ಲಿ ಅತ್ಯಾಧುನಿಕ ಎನ್-ಜೆನ್ ಅಂಚೆ ಕಚೇರಿ ಲೋಕಾರ್ಪಣೆಗೊಳಿಸಿದ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
5. ತಮಿಳುನಾಡಿಗೆ ಕಬಿನಿ, ಕೆಆರ್ಎಸ್ ಜಲಾಶಯಗಳಿಂದ ನೀರು ಬಿಡುಗಡೆ : ಹೊಗೇನಕಲ್‌ನಲ್ಲಿ ಕಾವೇರಿ ನದಿಯ ಒಳಹರಿವು ಹೆಚ್ಚಳ

<><><><>

ಸರ್ಕಾರಿ ಶಾಲೆಯಲ್ಲಿ ೧೦ನೇ ತರಗತಿ ಹಾಗೂ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ೧೨ನೇ ತರಗತಿ ಶಿಕ್ಷಣ ಪೂರ್ಣಗೊಳಿಸಿ ಉನ್ನತ ಶಿಕ್ಷಣ ಪಡೆಯಲು ಬಯಸುವ ವಿದ್ಯಾರ್ಥಿನಿಯರಿಗೆ ಆರ್ಥಿಕ ನೆರವು ನೀಡುವ ಉದ್ದೇಶದಿಂದ ದೀಪಿಕಾ ಉನ್ನತ ಶಿಕ್ಷಣ ವಿದ್ಯಾರ್ಥಿ ವೇತನ ಯೋಜನೆ ಜಾರಿಗೊಳಿಸಲಾಗಿದೆ. ವಿದ್ಯಾರ್ಥಿ ವೇತನ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಈ ಯೋಜನೆಯಡಿ ಅರ್ಹ ವಿದ್ಯಾರ್ಥಿನಿಯರಿಗೆ ೩ ವರ್ಷಕ್ಕೆ ೩೦ ಸಾವಿರ ರೂಪಾಯಿ ವಿದ್ಯಾರ್ಥಿ ವೇತನ ನೀಡಲಾಗುವುದು ಎಂದು ತಿಳಿಸಿದ್ದಾರೆ. ಎಂಜಿನಿಯರಿಂಗ್, ವೈದ್ಯಕೀಯ, ಬಿಎ., ಬಿಕಾಂ., ಬಿಎಸ್‌ಸಿ ಸೇರಿದಂತೆ ವಿವಿಧ ಪದವಿ ಹಾಗೂ ಉನ್ನತ ಶಿಕ್ಷಣದ ಕೋರ್ಸ್‌ಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿನಿಯರು ಪ್ರಯೋಜನ ಪಡೆಯಬಹುದು. ಮೂರು ವರ್ಷದ ಕೋರ್ಸ್ ೬೦ ಸಾವಿರ, ೪ ವರ್ಷ ಕೋರ್ಸ್‌ಗೆ ೧ ಲಕ್ಷದ ೨೦ ಸಾವಿರ, ವೈದ್ಯಕೀಯ ಕೋರ್ಸ್‌ಗೆ ೧ ಲಕ್ಷದ ೫೦ ಸಾವಿರ ರೂಪಾಯಿ ನೆರವು ದೊರೆಯಲಿದೆ ಎಂದು ತಿಳಿಸಿದ್ದಾರೆ. ಆದಾಯ, ಜಾತಿ, ಮೆರಿಟ್ ಸೇರಿದಂತೆ ಯಾವುದೇ ಮಾನದಂಡಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಡಾ.ಬಿ.ಆರ್.ಅಂಬೇಡ್ಕರ್ ಅವರ ಚಿಂತನೆಗಳನ್ನು ಮುಂದಿನ ಪೀಳಿಗೆಗೆ ತಿಳಿಸುವ ದೃಷ್ಟಿಯಿಂದ ಚಿಂತಾಮಣಿಯಲ್ಲಿ ೨೧ ಕೋಟಿ ರೂಪಾಯಿ ವೆಚ್ಚದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಭವನ ಹಾಗೂ ಅನುಭವ ಕೇಂದ್ರವನ್ನು ನಿರ್ಮಾಣ ಮಾಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಅನುಭವ ಕೇಂದ್ರ ಲೋಕಾರ್ಪಣೆಗೊಳಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಈಗಾಗಲೇ ೧೦೨ ತಾಲೂಕುಗಳಲ್ಲಿ ಬರಪೀಡಿತ ಪ್ರದೇಶವನ್ನು ಅವಲೋಕನ ನಡೆಸುವಂತೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ. ವರದಿ ಬಂದ ಬಳಿಕ, ಬರಪೀಡಿತ ಪ್ರದೇಶಗಳನ್ನು ಘೋಷಿಸಿ ಕೇಂದ್ರ ಸರ್ಕಾರಕ್ಕೆ ವಿಸ್ತೃತ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ಸದನದಲ್ಲಿ ಪ್ರತಿಭಟನೆ ನಡೆಸಲು ನಿಯಮಗಳಿದ್ದು, ರಾಜಕೀಯ ಸರಿಯಲ್ಲ ಎಂದು ವಿಪಕ್ಷಗಳಿಗೆ ತಿರುಗೇಟು ನೀಡಿದ್ದಾರೆ. ರಾಜ್ಯದ ನಿಜವಾದ ಸಮಸ್ಯೆಗಳ ಬಗ್ಗೆ ಚರ್ಚಿಸಲು ಪ್ರತಿಪಕ್ಷಗಳಿಗೆ ಆಸಕ್ತಿಯಿಲ್ಲ ಎಂದು ಪರಮೇಶ್ವರ್ ದೂರಿದ್ದಾರೆ.

<><><>

ನೈಸ್ ರಸ್ತೆ ಯೋಜನೆ ದೇವೇಗೌಡರ ಕನಸಿನ ಕೂಸಾಗಿದ್ದು, ಬಳಿಕ ಆಡಳಿತಕ್ಕೆ ಬಂದ ಸರ್ಕಾರಗಳು ಕಂಪನಿ ಮಾಲೀಕರ ಮೂಲಕ ಭ್ರಷ್ಟಾಚಾರಕ್ಕೆ ಅವಕಾಶ ನೀಡಿವೆ ಎಂದು ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ. ಹಾಸನದ ಹೊಳೆನರಸೀಪುರದಲ್ಲಿ ಮಾತನಾಡಿದ ಅವರು, ನೈಸ್ ಯೋಜನೆಗಾಗಿ ಭೂಮಿ ಕಳೆದುಕೊಂಡ ರೈತರಿಗೆ ೨೦ ವರ್ಷವಾದರೂ ಪರಿಹಾರ ದೊರೆತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ನೈಸ್ ಕಂಪನಿ ತನ್ನ ಯೋಜನೆ ಪೂರ್ಣಗೊಳಿಸುವ ಬದಲು ನ್ಯಾಯಾಲಯಕ್ಕೆ ಸರ್ಕಾರವನ್ನು ಎಳೆ ತರುವ ಮೂಲಕ ಮುಖಭಂಗ ಮಾಡಿದೆ ಎಂದು ದೂರಿದ್ದಾರೆ. ಕಾನೂನು ಬಾಹಿರವಾಗಿ ಟೋಲ್ ವಸೂಲು ಮಾಡಲು ಅವಕಾಶ ನೀಡಲಾಗಿದೆ. ಸರ್ಕಾರದ ಅನುಮತಿ ಪಡೆಯದೇ ವರ್ಷದಿಂದ ವರ್ಷಕ್ಕೆ ಟೋಲ್ ದರ ಹೆಚ್ಚಿಸಲಾಗಿದೆ ಎಂದು ಅಸಮಧಾನ ವ್ಯಕ್ತಪಡಿಸಿದ್ದಾರೆ. ೧೧೧ ಕಿಲೋಮೀಟರ್ ರಸ್ತೆ ಯೋಜನೆಯಡಿ ಕೇವಲ ೫ ಕಿಲೋಮೀಟರ್ ರಸ್ತೆ ನಿರ್ಮಿಸಿ ಟೋಲ್ ಸಂಗ್ರಹಿಸಲಾಗುತ್ತಿದೆ. ಇದುವರೆಗೆ ಸುಮಾರು ೨ ಸಾವಿರ ಕೋಟಿ ರೂಪಾಯಿ ಟೋಲ್ ಸಂಗ್ರಹಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><>

ಕೇಂದ್ರ ಸಚಿವರಾಗಿ ಹೆಚ್.ಡಿ.ಕುಮಾರಸ್ವಾಮಿ ಅವರು ನೈಸ್‌ರಸ್ತೆಯಲ್ಲಿ ಟೋಲ್ ಕಟ್ಟಬೇಡಿ ಎಂದು ಜನರಿಗೆ ಪ್ರಚೋದನೆ ನೀಡುವುದು ಸರಿಯಲ್ಲ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜವಾಬ್ದಾರಿ ಸ್ಥಾನದಲ್ಲಿರುವ ಕುಮಾರಸ್ವಾಮಿಯವರು ಈ ರೀತಿ ಕರೆ ನೀಡಬಾರದು ಎಂದು

ತಿಳಿಸಿದ್ದಾರೆ. ಇದೇ ವೇಳೆ, ಸಚಿವ ಬಿ.ನಾಗೇಂದ್ರ ರಾಜೀನಾಮೆ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಸಿಐಡಿ ಹಾಗೂ ಎಸ್‌ಐಟಿ ತನಿಖೆಯಲ್ಲಿ ನಾಗೇಂದ್ರ ಹೆಸರು ಇಲ್ಲ. ಸಿಬಿಐ ಹಾಗೂ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ೨ನೇ ಎಫ್‌ಐಆರ್‌ನಲ್ಲಿ ಅವರ ವಿರುದ್ಧ ಚಾರ್ಜ್‌ಶೀಟ್ ಹಾಕಿದ್ದಾರೆ. ಈ ವಿಷಯದ ಕುರಿತಂತೆ ಸದನದಲ್ಲಿ ಪ್ರತಿಪಕ್ಷಗಳು ಯಾಕೆ ಚರ್ಚೆ ಮಾಡುತ್ತಿಲ್ಲ ಎಂದು ಪ್ರಿಯಾಂಕ್ ಖರ್ಗೆ ಪ್ರತಿಪಕ್ಷಗಳನ್ನು ಪ್ರಶ್ನಿಸಿದ್ದಾರೆ.

<><><><>

ಧಾರವಾಡದ ವಿದ್ಯಾಗಿರಿಯಲ್ಲಿ ನವೀಕೃತಗೊಂಡ ಅತ್ಯಾಧುನಿಕ ಎನ್-ಜೆನ್ ಅಂಚೆ ಕಚೇರಿಯನ್ನು ಕೇಂದ್ರ ಶಿಕ್ಷಣ ಸಚಿವ ಪ್ರಹ್ಲಾದ್ ಜೋಶಿ ಲೋಕಾರ್ಪಣೆಗೊಳಿಸಿದರು. ಬಳಿಕ ಮಾತನಾಡಿದ ಅವರು, ಅಂಚೆ ಇಲಾಖೆಯು ಸಾರ್ವಜನಿಕರಿಗೆ ಆಧುನಿಕ ಸೌಲಭ್ಯಗಳು, ಸುಧಾರಿತ ಮೂಲಸೌಕರ್ಯ ಹಾಗೂ ತಂತ್ರಜ್ಞಾನ ಆಧಾರಿತ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಈ ನೂತನ ಅಂಚೆ ಕಚೇರಿಯನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ತಿಳಿಸಿದ್ದಾರೆ. ಈಗಾಗಲೇ ಇಂಡಿಯನ್ ಪೋಸ್ಟ್ ದೇಶಾದ್ಯಂತ ೧೦೦ಕ್ಕೂ ಹೆಚ್ಚು ಎನ್-ಜೆನ್ ಅಂಚೆ ಕಚೇರಿಗಳನ್ನು ಹೊಂದಿದ್ದು, ಈ ಯೋಜನೆಯಡಿ ಧಾರವಾಡದ ವಿದ್ಯಾಗಿರಿ ಕಚೇರಿಯೂ ರಾಷ್ಟ್ರವ್ಯಾಪಿ ವಿಸ್ತರಣೆಯ ಭಾಗವಾಗಿರುವುದು ಹೆಮ್ಮೆಯ ವಿಚಾರ ಎಂದು ಹೇಳಿದ್ದಾರೆ. ವಿಶ್ವವಿದ್ಯಾಲಯಗಳು ಮತ್ತು ಕಾಲೇಜು ಆವರಣಗಳಲ್ಲಿ ಯುವ ಪೀಳಿಗೆಗೆ ಅನುಕೂಲವಾಗುವಂತೆ ಆರಂಭಿಸಿರುವ ಈ ಅಂಚೆ ಕಚೇರಿ ಆಧುನಿಕ ಮತ್ತು ಡಿಜಿಟಲ್ ಸ್ನೇಹಿಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

ಕಬಿನಿ ಮತ್ತು ಕೃಷ್ಣರಾಜ ಸಾಗರ ಜಲಾಶಯಗಳಿಂದ ನಿರಂತರವಾಗಿ ನೀರು ಬಿಡುತ್ತಿರುವುದರಿಂದ ತಮಿಳುನಾಡಿನ ಹೊಗೇನಕಲ್‌ನಲ್ಲಿ ಇಂದು ಕಾವೇರಿ ನದಿಯ ಒಳಹರಿವು ೧೨ ಸಾವಿರ ಕ್ಯೂಸೆಕ್‌ಗಳಿಗೆ ಏರಿದೆ. ಈ ನಡುವೆ ಪ್ರವಾಸಿಗರನ್ನು ರಕ್ಷಿಸಲು ಮುನ್ನೆಚ್ಚರಿಕಾ ಕ್ರಮವಾಗಿ ಧರ್ಮಪುರಿ ಜಿಲ್ಲಾಡಳಿತ ನಿಷೇಧ ಮುಂದುವರೆಸಿದೆ. ಕೇಂದ್ರ ಆಯೋಗದ ಸೂಚನೆ ಬಳಿಕ ರಾಜ್ಯ ಸರ್ಕಾರ ಕೆ.ಆರ್.ಎಸ್. ಮತ್ತು ಕಬಿನಿ ಅಣೆಕಟ್ಟುಗಳಿಂದ ಒಟ್ಟು ೧೪ ಸಾವಿರದ ೬೪೦ ಕ್ಯೂಸೆಕ್ ನೀರು ಬಿಡುಗಡೆ ಮಾಡಿದ್ದು, ಈ ಏರಿಕೆ ಕಂಡು ಬಂದಿದೆ.

<><><><>

ಕೃಷ್ಣರಾಜ ಸಾಗರ ಜಲಾಶಯದ ಸಲಹಾ ಸಮಿತಿ ಸಭೆಯಲ್ಲಿ ಕಬ್ಬು, ಭತ್ತ ಹೊರತುಪಡಿಸಿ ಉಪಬೆಳೆಗಳನ್ನು ಬೆಳೆಯುವಂತೆ ಸರ್ಕಾರ ಸೂಚನೆ ನೀಡಿರುವುದನ್ನು ಖಂಡಿಸಿ ಮಂಡ್ಯ ರೈತರು ಬೆಂಗಳೂರು- ಮೈಸೂರು ಹೆದ್ದಾರಿ ತಡೆದು ರಾಗಿ ಗಂಜಿ ಸೇವಿಸುವ ಮೂಲಕ ವಿನೂತನ ಪ್ರತಿಭಟನೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಕನ್ನಡ ಪರ ಹೋರಾಟಗಾರ ಮಂಜುನಾಥ್, ಪ್ರತಿದಿನ ಕೆ.ಆರ್.ಎಸ್. ಜಲಾಶಯದಿಂದ ೧೨ ಸಾವಿರ ಕ್ಯೂಸೆಕ್ ನೀರು ತಮಿಳುನಾಡಿಗೆ

ಹರಿಯುತ್ತಿದೆ. ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಜಲಸಂಪನ್ಮೂಲ ಸಚಿವ ಚಲುವರಾಯಸ್ವಾಮಿ ಮಾತ್ರ ಮಂಡ್ಯ ಜಿಲ್ಲೆಯ ರೈತರು ಉಪ ಬೆಳೆ ಬೆಳೆದರೆ ನೀರು ನೀಡಲಾಗುವುದು ಎಂದಿದ್ದಾರೆ. ನಮ್ಮ ನೀರನ್ನು ತಮಿಳುನಾಡಿಗೆ ನೀಡಿ, ನಾವು ಯಾಕೆ ಉಪ ಬೆಳೆ ಬೆಳೆಯಬೇಕೆಂದು ಪ್ರಶ್ನಿಸಿದ್ದಾರೆ.

ಇದನ್ನು ಖಂಡಿಸಿ ಇದೇ ೨೬ ರಂದು ಕೆ.ಆರ್.ಎಸ್.ಗೆ ಮುತ್ತಿಗೆ ಹಾಕುವುದಾಗಿ ಎಚ್ಚರಿಕೆ ನೀಡಿದ್ದಾರೆ.

<><><>

ರಾಜ್ಯದ ಐಎಎಸ್ ಅಧಿಕಾರಿ ನಾಪತ್ತೆಯಾಗಿದ್ದಾರೆ ಎಂಬ ವರದಿಗಳು ಸತ್ಯಕ್ಕೆ ದೂರ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಸಂಬಂಧಪಟ್ಟ ಅಧಿಕಾರಿ ಸರ್ಕಾರದೊಂದಿಗೆ ಸಂವಹನ ನಡೆಸಿ, ಕೌಟುಂಬಿಕ ತುರ್ತು ಪರಿಸ್ಥಿತಿ ಹಿನ್ನೆಲೆಯಲ್ಲಿ ರಜೆ ಕೋರಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ. ತಮ್ಮ ಅಧಿಕೃತ ದೂರವಾಣಿ ಸಂಪರ್ಕದಲ್ಲಿ ಇಲ್ಲದ ಕಾರಣ ಅವರು, ಎಲ್ಲಿದ್ದಾರೆ ಎಂಬ ಬಗ್ಗೆ ಗೊಂದಲ ಹಾಗೂ ಊಹಾಪೋಹಗಳಿಗೆ ಕಾರಣವಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><>

ಗ್ರಾಮ ಪಂಚಾಯಿತಿ ಚುನಾವಣೆ ಹಿನ್ನೆಲೆಯಲ್ಲಿ ಹಾಸನ ಜಿಲ್ಲೆಯಲ್ಲಿ ಪ್ರಕಟಿಸಲಾಗಿರುವ ಮೀಸಲಾತಿ ಪ್ರಕ್ರಿಯೆಯಲ್ಲಿ ಹಲವಾರು ಲೋಪಗಳಾಗಿದ್ದು, ನಿಯಮಗಳನ್ನು ಪಾಲಿಸದೇ ಮೀಸಲಾತಿ ನಿಗದಿಪಡಿಸಲಾಗಿದೆ ಎಂದು ಜೆಡಿಎಸ್ ನಾಯಕರು ಆರೋಪಿಸಿದ್ದಾರೆ. ಹಾಸನದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಮಾಜಿ ಸಚಿವರಾದ ಹೆಚ್.ಡಿ.ರೇವಣ್ಣ, ಎ.ಮಂಜು, ಎಚ್.ಕೆ.ಕುಮಾರಸ್ವಾಮಿ ಮಾತನಾಡಿ, ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಮೀಸಲಾತಿ ನಿಗದಿಪಡಿಸುವ ಮುನ್ನ ಜನರ ಅಭಿಪ್ರಾಯವನ್ನು ಪರಿಗಣಿಸಬೇಕು ಎಂದು ತಿಳಿಸಿದ್ದಾರೆ. ಮಾಜಿ ಸಚಿವ ಹೆಚ್.ಡಿ.ರೇವಣ್ಣ ಮಾತನಾಡಿ, ಸರ್ಕಾರ ಯಾವುದೇ ಅಭಿಪ್ರಾಯ ಸಂಗ್ರಹಿಸದೇ ಏಕಾಏಕಿ ಮೀಸಲಾತಿ ಪ್ರಕಟಿಸಿರುವುದು ಖಂಡನೀಯ ಎಂದು ಹೇಳಿದ್ದಾರೆ. ಒಂದು ವಾರದೊಳಗೆ ಮೀಸಲಾತಿ ಪ್ರಕ್ರಿಯೆಯನ್ನು ಸರಿಪಡಿಸದಿದ್ದರೆ, ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಇದೇ ವೇಳೆ ಜಿಲ್ಲೆಯಲ್ಲಿ ಬರಪರಿಸ್ಥಿತಿ ತೀವ್ರವಾಗಿದ್ದರೂ ಸರ್ಕಾರ ಗಮನ ಹರಿಸುತ್ತಿಲ್ಲ ಎಂದು ದೂರಿದ್ದಾರೆ.

<><><>

ಪರಿಸರ ಸಂರಕ್ಷಣೆಯೊಂದಿಗೆ ಜನರ ಹಿತಾಸಕ್ತಿ ಕಾಪಾಡುವುದು ಸರಕಾರದ ಕರ್ತವ್ಯವಾಗಿದೆ ಎಂದು ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಶಾಸಕ ಎ.ಎಸ್. ಪೊನ್ನಣ್ಣ ತಿಳಿಸಿದ್ದಾರೆ. ಮಡಿಕೇರಿಯಲ್ಲಿ ಮಾತನಾಡಿದ ಅವರು, ಪರಿಸರ ಹಾಗೂ ಪಶ್ಚಿಮಘಟ್ಟ ರಕ್ಷಣೆಯಾದರೆ ಮಾತ್ರ ನಾಡು ಉಳಿಸಿ, ನೈಸರ್ಗಿಕ ಸಮತೋಲನ ಕಾಪಾಡಬಹುದಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಕಸ್ತೂರಿರಂಗನ್ ವರದಿ ಜಾರಿಯಿಂದ ಗ್ರಾಮೀಣ ಭಾಗದ ಜನಜೀವನ, ಕೃಷಿ ಚಟುವಟಿಕೆ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದೆ. ಈಗಾಗಲೇ ಅರಣ್ಯ ಇಲಾಖೆ ಹೇರಿರುವ ಅನೇಕ ಕಡಿವಾಣಗಳಿಂದ ಜನರು ತೊಂದರೆ ಅನುಭವಿಸುತ್ತಿದ್ದಾರೆ. ಕೃಷಿ ಚಟುವಟಿಕೆ ಸಂಬಂಧ ಬಾವಿ ನಿರ್ಮಾಣ, ಮರಗಳ ರೆಂಬೆ-ಕೊಂಬೆ ಕತ್ತರಿಸಲು ನಿರ್ಬಂಧ ಹೇರಿರುವುದನ್ನು ಒಪ್ಪಲಾಗುವುದಿಲ್ಲ ಎಂದು ಪೊನ್ನಣ್ಣ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>